742(350) ಶ್ರೀ ಹಾಲಪ್ಪ ಹೆಚ್ (ಹೊಸನಗರ) : ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕು ಶೆಟ್ಟಿಹಳ್ಳಿ ಅಭಯಾರಣ್ಯ ಪ್ರದೇಶದಲ್ಲಿ ಬಯೋಸ್ಪಿಯರ್ ಯೋಜನೆ ಅನ್ವಯ ರೈತರ ಜಮೀನನ್ನು ಅರಣ್ಯ ಇಲಾಖೆಯವರು ಖರೀದಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಗುರುಪಾದಪ್ಪ ನಾಗಮಾರ ಪಳ್ಳಿ (ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಶಿವಮೊಗ್ಗ ತಾಲ್ಲೂಕು ಶೆಟ್ಟಿಹಳ್ಳಿ ಅಭಯಾರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಖಾಸಗಿ ಜಮೀನನ್ನು ಅವರ ಸ್ವಇಚ್ಛೆಯಿಂದ ಸರ್ಕಾರಕ್ಕೆ ನೀಡಲು ಬಯಸಿದಲ್ಲಿ ಅದನ್ನು ಖರೀದಿಸುವ ವಿಷಯ ಇಲಾಖಾ ಮಟ್ಟದಲ್ಲಿ ಪರಿಶೀಲಿಸಲಾಗುತ್ತಿದೆ.

ಆ) ಭಾರತ ಸರ್ಕಾರವು 2002–2016ರ ಅವಧಿಗೆ ರಾಷ್ಟ್ರೀಯ ವನ್ಯಜೀವಿ ಕ್ರಿಯಾ ಯೋಜನೆಯೊಂದನ್ನು ಹೊರಡಿಸಿದೆ ಈ ಯೋಜನೆಯಡಿಯಲ್ಲಿ ರಕ್ಷಿತ ಪ್ರದೇಶಗಳ ಅಭಿವೃದ್ಧಿ ಬಲಪಡಿಸುವ ನಿಟ್ಟಿನಲ್ಲಿ ಸ್ವಇಚ್ಛೆಯಿಂದ ವನ್ಯಧಾಮಗಳಿಂದ ಸ್ಥಳಾಂತರ ಹೊಂದಲು ಹಾಗೂ ಪುನರ್ವಸತಿ ಬಯಸುವ ಖಾಸಗೀ ಭೂ ಮಾಲೀಕರ ರಾಜ್ಯ ಸರ್ಕಾರಗಳ ಮುಖಾಂತರ ಅನುಷ್ಠಾನಗೊಳಿಸುವ ಕಾರ್ಯಕ್ರಮ ಸದರಿ ಯೋಜನೆಯ ಒಂದು ಅಂಶವಾಗಿದೆ.

ಈ ಹಿನ್ನೆಲೆಯಲ್ಲಿ ಅಭಯಾರಣ್ಯದ ಪರಮಿತಿಯೊಳಗೆ ಬರುವ ಖಾಸಗಿ ಜಮೀನನ್ನು ಅವರ ಸ್ವಇಚ್ಛೆಯಿಂದ ಸರ್ಕಾರಕ್ಕೆ ನೀಡುದಾದಲ್ಲಿ ಅದನ್ನು ಖರೀದಿಸುವ ಸಾಧ್ಯತೆ ಬಗ್ಗೆ ಪರಿಶೀಲಿಸಬೇಕಾಗಿರುತ್ತದೆ. ಜಮೀನಿನ ಖರೀದಿಗೆ ದೊಡ್ಡ ಮೊತ್ತದ ಅನುದಾನ ಬೇಕಾಗಿರುತ್ತದೆ. ಇದಕ್ಕೆ ಭಾರತ ಸರ್ಕಾರವು ನೀಡುವ ಆರ್ಥಿಕ ಯೋಜನೆ ಅಥವಾ ಅರಣ್ಯ ಪ್ರದೇಶದ ಉಪಯೋಗಿ ಸಂಸ್ಥೆಯವರು ನೀಡುವ ಹಣದಿಂದ ಅನುವುಮಾಡಿಕೊಳ್ಳಬೇಕಾಗುತ್ತದೆ.

ಈ ಉದ್ದೇಶಿತ ಯೋಜನೆಯ ಅನುಷ್ಠಾನಕ್ಕಾಗಿ ಯಾವುದೇ ಪ್ರದೇಶವನ್ನು ಸ್ವಾಧೀನಪಡಿಸಿಕೊಳ್ಳಲು ಇನ್ನೂ ಗುರುತಿಸಿರುವುದಿಲ್ಲ ಅಥವಾ ಗುರಿ ನಿಗದಿಪಡಿಸಿರುವುದಿಲ್ಲ. ಯೋಜನೆಯನ್ನು ಅಂತಿಮಗೊಳಿಸುವ ಮೊದಲು ಆಳವಾದ ಪರಿಶೀಲನೆ ಹಾಗೂ ಚರ್ಚೆಯ ಅವಶ್ಯಕತೆ ಇದೆ.

ಈ ವಿಷಯದಲ್ಲಿ ಯಾವುದೇ ಅಂತಿಮ ತೀರ್ಮಾನ ಕೈಗೊಳ್ಳುವ ಮೊದಲು ಜನಪ್ರತಿನಿಧಿಗಳೊಂದಿಗೆ ಮತ್ತು ಸಂಬಂಧಪಟ್ಟ ರೈತರೊಂದಿಗೆ ಚರ್ಚಿಸಲಾಗುವುದು.

744(976) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಸರ್ಕಾರ ಘೋಷಣೆ ಮಾಡಿದೆ ಹಾಗೂ ಅವು ಯಾವುವು (ತಾಲ್ಲೂಕುವಾರು ವಿವರ ನೀಡುವುದು) ;

ಆ) ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲು ಬಾಕಿ ಇದೆ (ತಾಲ್ಲೂಕುಗಳ ಹೆಸರು ನೀಡುವುದು);

ಇ) ಇದಕ್ಕಾಗಿ ಸರ್ಕಾರ ನಿಗದಿ ಮಾಡಿರುವ ಹಣ ಹಾಗೂ ಧಾನ್ಯದ ಪ್ರಮಾಣವೆಷ್ಟು (ವಿವರ ನೀಡುವುದು);

ಈ) ಇದುವರೆಗೂ ಬಿಡುಗಡೆ ಮಾಡಿದ ಹಾಗೂ ವಿತರಣೆ ಮಾಡಿದ ಪ್ರಮಾಣವೆಷ್ಟು (ತಾಲ್ಲೂಕುವಾರು ವಿವರ ನೀಡುವುದು);